ಮೈಸೂರ ಗೆಜೆಟ್.

ನಂ. 42.] ಸರ್ಕಾರದಿಂದ ಪ್ರಾಯಿಷ್ ಆದ್ದು [ನಂ. 8.

ಬೆಂಗಳೂರು, ಗುರುವಾರ, ಫೆಬ್ರವರಿ ತಾ॥ 21, ಸನ್ 1907.

ಭಾಗಗಳನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಬೇರೆ ಬೇರೆಯಾಗಿ ಪುಟನಂಬೆ ಕೊಡಲ್ಪಡುತ್ತೆ.

ವಿಷಯ ಸೂಚಿಕೆ.

1ನೆ ಭಾಗ—ಮೈಸೂರು ಸೀಮೆಯ ಶ್ರೀಮರ್ ಮಹಾರಾಜಾ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

2ನೆ ಭಾಗ—ರೆಸಿಡೆಂಟರು, ಚೀಫ್ ಜಡ್ಜಿಯವರು, ಸರ್ವೆ ವ ಇನಾಂ ಸೂಪರ್ಡಿಟೆಂಡೆಂಟರು, ರೆವಿನ್ಯೂ ಕಮ್ಮಿಷನರವರು, ಕಲೆಕ್ಟ್ರೋಲರವರು, ಪಬ್ಲಿಕ್ವರ್ಕ್ಸ್ ಆಫಿಸರ್‌ಗಳು, ಫಾರೆಸ್ಟ್ರು, ರೆಜಿಸ್ಟ್ರೇರ್ಸ ವ ಎಡ್ಯುಕೇಷನ್ ಇನ್‌ಸ್ಪೆಕ್ಟರ್ ಜನರಲ್ಲವರು, ಮ್ಯುನಿಸಿಪಲ್‌ಬೋರ್ಡು ಪ್ರಸಿಡೆಂಟರು ಡಿಸ್ಟ್ರಿಕ್ಟು ವ ಸೆಷನ್ ಜಡ್ಜಿರು, ಡಿಸ್ಟ್ರಿಕ್ಟು ಡೆಪ್ಯುಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜಿರು, ಪೊಲೀಸ್ ಸೂಪರ್ಡಿಟೆಂಡೆಂಟರು, ಫಾರೆಸ್ಟ್ರು ಆಫಿಸರ್‌ಗಳು ಇವರುಗಳಿಂದ ಕೊಡೋಣಾದ ಇಸ್ತಿಹಾರ್‌ಗಳು ವಗೈರೆ ಕಾಲಸ್ಥಿತೀ ರಿಪೋರ್ಟುಗಳು; ಪೋಸ್ಟ್ಫಾಫೀಸ್ ನೋಟೀಸುಗಳು.

3ನೆ ಭಾಗ—ಲೆಜಿಸ್‌ಲೇಟಿವ್ ರೆಗ್ಯುಲೇಷ್ಗಳು ಮತ್ತು ಅವುಗಳಂತೆ ಆದ ನಿಬಂಧನೆಗಳು—ಇಲ್ಲಾ.

4ನೆ ಭಾಗ—ಸರ್ಕಾರೀ ಕಾಗದ ಪತ್ರಗಳು.

1ನೆ ಭಾಗ.

ಮೈಸೂರು ಸೀಮೆಯ ಶ್ರೀಮರ್ ಮಹಾರಾಜಾ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

ಜನರಲ್ ಮತ್ತು ರೆವಿನ್ಯೂ.

ತಾರೀಖು 30ನೆ ಜನವರಿ 1907.

ನಂ. 6762—ಸ್ಯಾನಿಟೆರಿ 57-06—8, ಚಿತ್ರದುರ್ಗ ಡಿಸ್ಟ್ರಿಕ್ಟು ಜೆಳ್ಳಕೆರೆ ತಾಲ್ಲೂಕಿನ ನಾಯಕನಹಟ್ಟಿ ಗ್ರಾಮಕ್ಕೆ ತಿಪ್ಪೇರುದ್ರನ ಜಾತ್ರೆ ಕಾಲದಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶಕೊಟ್ಟರೆ ಅಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮರ್ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ—

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನ್ಸಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಮೈಸೂರು ಶ್ರೀಮರ್ ಮಹಾರಾಜರವರ ಸರ್ಕಾರದವರು 1907ನೆಯ ವರ್ಷದ ಮಾರ್ಚಿ 1ನೆ ತಾರೀಖಿನಿಂದ 1907ನೆ ಇಸವಿ ಮಾರ್ಚಿ 13ನೆ ತಾರೀಖಿನ ವರೆಗೆ (ಉಭಯ ದಿನಗಳೂ ಸೇರಿ) ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಅಲ್ಲಿಗೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್‌ನಾಮೆಗೆ ವಿರೋಧವಾಗಿ ನಡೆಲ್ಕಂಡ ಜಾತ್ರೆಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.

ತಾರೀಖು 1ನೆ ಫೆಬ್ರವರಿ 1907.

ನಂ. 6797—ಸ್ಯಾನಿಟರಿ 15-06—6, ಸಮಸ್ತ ಜನರ ತಿಳಿವಳಿಕೆಯ ಬಗ್ಗೆ ಇದರಿಂದ ಪ್ರಸಿದ್ಧಿ ಪಡಿಸುವುದೇನಂದರೆ:—ಮೈಸೂರು ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಪ್ರದೇಶವು ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷ್ ಎಂಬ ಸಾಂಕ್ರಾಮಿಕ ಜಾಡ್ಯಗಳಿಗೆ ಸಂಬಂಧಪಟ್ಟ ಕಾನೂನನ್ನು ಅನುಸರಿಸಿ 1898ನೆಯ ವರ್ಷದ ಫೆಬ್ರವರಿ 10ನೆಯ ತಾರೀಖಿನ ನಂಬರ್ 9383—ಮಿಸಲೇನಿಯಸ್ ಫೈಲ್ 21—96 ಮತ್ತು ನಂಬರ್ 9384—ಮಿಸಲೇನಿಯಸ್ ಫೈಲ್ 21—96 ಈ ನಂಬರುಗಳ ಇಸ್ತಿಹಾರ್‌ನಾಮೆಗಳೊಡನೆ ಪ್ರಕಟಿಸಲ್ಪಟ್ಟ ರೆಗ್ಯುಲೇಷನುಗಳ ಉದ್ದೇಶಾರ್ಥಗಳಿಗಾಗಿ ಪ್ಲೇಗು ತಗುಲಿದ ಪ್ರದೇಶವೆಂದು ಎಣಿಸಲ್ಪಡುವುದು.

ಸ್ಥಳ.	ತಾಲ್ಲೂಕು.
ವೆಣಸಿಬೋರನ ಕೊಪ್ಪಲು	ಶ್ರೀರಂಗಪಟ್ಟಣ